# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ : ಸ.ಅ/ವಾರ್ಡ್ ಸಮಿತಿ ಸಭೆ/2020-21 ದಿನಾಂಕ : 29-03-2021

## -: ಸಭಾ ಸೂಚನಾ ಪತ್ರ :-

ಉಲ್ಲೇಖ : 1) ಮಾನ್ಯ ಆಯುಕ್ತರ ಕಛೇರಿಯ ತಿದ್ದುಪಡಿ ಆದೇಶ ಸಂಖ್ಯೆ : ಬಿ12(5)ಪಿಆರ್/35/ 2020-21 ದಿನಾಂಕ : 02-10-2020.

-****-

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ, ಸರ್ವಜ್ಞನಗರ ವಿಭಾಗ, ಮಾರುತಿಸೇವಾನಗರ ಉಪವಿಭಾಗ ವ್ಯಾಪ್ತಿಗೆ ಒಳಪಡುವ ವಾರ್ಡ್ ಸಂಖ್ಯೆ-29 ಕಾಚರಕನಹಳ್ಳಿಯ ಕುವೆಂಪು ಪಾರ್ಕ್ ಪಕ್ಕದಲ್ಲಿರುವ ಪಾಲಿಕೆ ಕಟ್ಟಡದಲ್ಲಿ ದಿನಾಂಕ : 03-04-2021 ಶನಿವಾರ ರಂದು ಬೆಳಿಗ್ಗೆ 10-30 ಗಂಟೆಗೆ ಮಾನ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರು ನಿಯೋಜಿಸಿರುವ ವಾರ್ಡ್‌ನ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ, ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ಸದರಿ ಸಭೆಗೆ ಎಲ್ಲಾ ಸದಸ್ಯರು ಸಕಾಲದಲ್ಲಿ ಆಗಮಿಸಿ ಸಭೆಯನ್ನು ಯಶಸ್ವಿಗೊಳಿಸಲು ಕೋರಿದೆ.

## -: ಸಭಾ ಅಜೆಂಡಾ :-

| | |
|---|---|
| 1 | ವಾರ್ಡಿನ ವಿವಿಧ ಬಡಾವಣೆಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ. |
| 2 | ವಾರ್ಡಿನ ಘನತ್ಯಾಜ್ಯ ನಿರ್ವಹಣೆಯ ಬಗ್ಗೆ. |
| 3 | ಕಂದಾಯ ಇಲಾಖೆಗೆ ಸಂಬಂಧಿಸಿದ ಬಗ್ಗೆ. |
| 4 | ನೀರು ಸರಬರಾಜು ಮತ್ತು ಒಳಚರಂಡಿಗೆ (BWSSB) ಸಂಬಂಧಿಸಿದ ವಿಷಯಗಳ ಬಗ್ಗೆ. |
| 5 | ವಿದ್ಯುತ್ ಸರಬರಾಜು (Bescom) ಸಂಬಂಧಿಸಿದ ವಿಷಯಗಳ ಬಗ್ಗೆ. |
| 6 | ಉದ್ಯಾನವನ ಮತ್ತು ಬೀದಿ ದೀಪ ನಿರ್ವಹಣೆಯ ಕುರಿತು |
| 7 | Traffic isues and Law and Order issues |
| 8 | ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 ಬಗ್ಗೆ ಚರ್ಚಿಸುವ ಬಗ್ಗೆ. |
| 9 | ಮಾನ್ಯ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳು. (ನೋಡಲ್ ಅಧಿಕಾರಿ ರವರ ಆದೇಶದ ಮೇರೆಗೆ) |

ಸಹಿ/-
ಕಾರ್ಯದರ್ಶಿ ವಾರ್ಡ್ ಸಮಿತಿ-29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-29

Office of Assistant Executive Engineer, B.W.S.S.B, East-2/1 Sub-division, Bangalore-43
Sl.No: Date: 30-3-21
H.R.B.R Layout Bangalore

**ಪ್ರತಿಯನ್ನು:-**

1. ಶ್ರೀಮತಿ ಸರಸ್ವತಿ ಸೆಂಟ್ರಲ್, ಲಿವಾಯು ಅಪಾರ್ಟ್‌ಮೆಂಟ್ ಓನರ್ಸ್ ಅಸೋಸಿಯೇಷನ್ ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.

Banasawadi Police Station
HC 9060
30/03/2021

BANASAWADI TRAFFIC POLICE STATION
No.
Date. 30/03/2021
BANGALORE

2. ಶ್ರೀ ಉತ್ತಪ್ಪ, ಸದಸ್ಯರು (ಅಧ್ಯಕ್ಷರು, ಹೆಚ್.ಆರ್.ಬಿ.ಆರ್ 3ನೇ ಬ್ಲಾಕ್ ಅಸೋಸಿಯೇಷನ್) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
3. ಶ್ರೀ ಪಿಳ್ಳಪ್ಪ(ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ)ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
4. ಶ್ರೀ ಪ್ರಸನ್ನ, ಪದಾಧಿಕಾರಿಗಳು, ಹೆಚ್.ಬಿ.ಆರ್ ಬಡಾವಣೆ, 1ನೇ ಹಂತ ಅಸೋಸಿಯೇಷನ (ರಿ) ರವರು ಸಭೆಯಲ್ಲಿ ಭಾಗವಹಿಸಲು ಕೋರಿದೆ.
5. ವಾರ್ಡ್ ಸಮಿತಿಯ ಎಲ್ಲಾ ಸದಸ್ಯರುಗಳ ಮಾಹಿತಿಗಾಗಿ ಹಾಗೂ ಸಭೆಯಲ್ಲಿ ಭಾಗವಹಿಸಲು ಕೋರಿದೆ.
6. ಕಲ್ಯಾಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
7. ಅರಣ್ಯ ಸಂರಕ್ಷಣಾಧಿಕಾರಿಗಳು, ಪೂರ್ವ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು, (BWSSB) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, (Bescom) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ (SWM) (ಸರ್ವಜ್ಞನಗರ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
11. ಸಹಾಯಕ ಕಂದಾಯ ಅಧಿಕಾರಿಗಳು, ಹೆಚ್.ಬಿ.ಆರ್ ಲೇಔಟ್ ಉಪವಿಭಾಗ, ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂದಿಯನ್ನು ನಿಯೋಜಿಸಲು ಕೋರಿದೆ.
12. ಪೊಲೀಸ್ ಇನ್ಸ್‌ಫೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
13. ಪೊಲೀಸ್ ಇನ್ಸ್‌ಫೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ ರವರು ಖುದ್ದಾಗಿ ಭಾಗವಹಿಸಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆಗಳು ಮತ್ತು ಮೂಲಭೂತ ಸೌಕರ್ಯಗಳು ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
15. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ (SWD) ರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
16. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ (ಬೀದಿ ದೀಪಗಳ ವಿಭಾಗ-ಪೂರ್ವ), ಬಿಬಿಎಂಪಿರವರ ಮಾಹಿತಿಗಾಗಿ ಹಾಗೂ ಖುದ್ದಾಗಿ ಹಾಜರಾಗಲು ಅಥವಾ ತಮ್ಮ ಸಿಬ್ಬಂಧಿಯನ್ನು ನಿಯೋಜಿಸಲು ಕೋರಿದೆ.
17. ಆರೋಗ್ಯ ವೈದ್ಯಾಧಿಕಾರಿಗಳು, ಕಾಚರಕನಹಳ್ಳಿ ರವರು ಖುದ್ದಾಗಿ ಹಾಜರಾಗಲು ಕೋರಿದೆ.
18. ತೋಟಗಾರಿಕಾ ಅಧಿಕಾರಿಗಳು, ಬೆಂಗಳೂರು ಪೂರ್ವ ರವರ ಮಾಹಿತಿಗಾಗಿ ಮತ್ತು ವಾರ್ಡ್ ಸಮಿತಿ ಸಭೆಗೆ ಹಾಜರಾಗಲು ಕಳುಹಿಸಿದೆ.
19. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ರಸ್ತೆ ಹಾಗೂ ಮೂಲಭೂತ ಸೌಕರ್ಯ, ಕೇಂದ್ರ (ಯೋಜನೆ) (White Topping) ರವರ
20. ಕಾರ್ಯಪಾಲಕ ಅಭಿಯಂತರರು, ಸರ್ವಜ್ಞನಗರ ವಿಭಾಗ ರವರ ಮಾಹಿತಿಗಾಗಿ ರವಾನಿಸಿದೆ.

29-3-2021

ಕಾರ್ಯದರ್ಶಿ ವಾರ್ಡ್ ಸಮಿತಿ-29
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್-29

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.29 ಕಾಚರಕನಹಳ್ಳಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 03-04-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ಪ್ರಸನ್ನಕುಮಾರ್ ಪ್ರವೀಣ್ ಎ, ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ.ಹೆಚ್.ವಿ.ಕೃಷ್ಣಾರೆಡ್ಡಿ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ.ಹನುಮಂತಪ್ಪ, ಹಿರಿಯ ಆರೋಗ್ಯ ನಿರೀಕ್ಷಕರು ಹಾಗೂ ಸದಸ್ಯರು,
4. ಶ್ರೀ.ರಾಜೇಶ್, ಕಿರಿಯ ಆರೋಗ್ಯ ನಿರೀಕ್ಷಕರು,
5. ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ),
6. ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ)
7. ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ)

**ಹಾಜರಿದ್ದ ಅಧಿಕಾರಿಗಳು**

1. ಶ್ರೀ.ದವಲ್, ಸಹಾಯಕ ಅಭಿಯಂತರರು, (ಬಿ.ಡಬ್ಲ್ಯೂ.ಎಸ್.ಎಸ್.ಬಿ),
2. ಶ್ರೀ ರಾಜಶೇಖರ್, ಕಂದಾಯ ನಿರೀಕ್ಷಕರು,
3. ಮಾರ್ಷಲ್, ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ,
4. ಸಹಾಯಕ ಸಬ್ ಇನ್ಸ್‌ಪೆಕ್ಟರ್ (ಕಾನೂನು ಮತ್ತು ಸುವ್ಯವಸ್ಥೆ) ಬಾಣಸವಾಡಿ ಪೊಲೀಸ್ ಠಾಣೆ,
5. ಸಬ್ ಇನ್ಸ್‌ಪೆಕ್ಟರ್ (ಸಂಚಾರ) ಬಾಣಸವಾಡಿ ಪೊಲೀಸ್ ಠಾಣೆ,
6. ಶ್ರೀ ವೆಂಕಟೇಶ್, ತೋಟಗಾರಿಕಾ ಇಲಾಖೆ,
7. ಶ್ರೀ ಪುಟ್ಟಸ್ವಾಮಿ, ಕಿರಿಯ/ಸಹಾಯಕ ಅಭಿಯಂತರರು, ಬೆಸ್ಕಾಂ ಇಲಾಖೆ.
8. ಶ್ರೀಮತಿ ರಾಜಶ್ರೀ, ಕಲ್ಯಾಣ ಇಲಾಖೆ,

ಈ ಸಭೆಗೆ ಹಾಜರಾಗಿದ್ದ ಮೇಲ್ಕಂಡ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

1) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ), ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ಅಲ್ಲಲ್ಲಿ ರಸ್ತೆ ಅಗೆತ ಮತ್ತು ಸಣ್ಣ ಪುಟ್ಟ ರಸ್ತೆ ಗುಂಡಿಗಳಿದ್ದು, ಇವುಗಳನ್ನು ಕೂಡಲೇ ತುಂಬಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರು, ರಸ್ತೆ ಅಗೆತ ಹಾಗೂ ರಸ್ತೆ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಪ್ರಾರಂಭಿಸಲಾಗಿದ್ದು, ಹಲವು ರಸ್ತೆ ಅಗೆತ ಹಾಗೂ ರಸ್ತೆ ಗುಂಡಿಗಳಿಗೆ ವೆಟ್‌ಮಿಕ್ಸ್ ಅನ್ನು ತುಂಬಲಾಗಿದ್ದು, ಗುಂಡಿ ಮುಚ್ಚುವ ಕಾಮಗಾರಿಯನ್ನು ಹಂತ ಹಂತವಾಗಿ ಪೂರ್ಣಗೊಳಿಸಲಾಗುವುದು ಎಂದು ಸಭೆಗೆ ತಿಳಿಸಿದರು.

2) **ಶ್ರೀಮತಿ ವಿನುತ, ಪದಾಧಿಕಾರಿಗಳು,ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ,** ಬಿಡಿಎ ಬಡಾವಣೆಯಲ್ಲಿ ಕಸದ ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸಲು ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಲಾಗಿತ್ತು. ಸದರಿ ಬಡಾವಣೆಗಳಿದ್ದ ಎರಡು ಬ್ಲಾಕ್‌ಸ್ಪಾಟ್‌ಗಳನ್ನು ತೆರವುಗೊಳಿಸಿ,

ಸ್ವಚ್ಛಗೊಳಿಸಲಾಗಿರುತ್ತದೆ ಎಂದು ಸಭೆಗೆ ತಿಳಿಸುತ್ತಾ, ಬಡಾವಣೆಯಲ್ಲಿ ರಸ್ತೆ ಗುಡಿಸುವುದನ್ನು ಇನ್ನಷ್ಟು ತೀವ್ರಗೊಳಿಸಿ, ಬಿಡಿಎ ಬಡಾವಣೆಯ ಎಲ್ಲಾ ರಸ್ತೆಗಳನ್ನು ಪ್ರತಿನಿತ್ಯ ಗುಡಿಸಿ, ಸ್ವಚ್ಛಗೊಳಿಸಲು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ, ಆರೋಗ್ಯ ನಿರೀಕ್ಷಕರು, ಇತ್ತೀಚೆಗೆ ಎಲ್ಲಾ ಗಿಡಮರಗಳಲ್ಲಿ ಎಲೆಗಳು ಉದುರಿರುವುದರಿಂದ ರಸ್ತೆ ಗುಡಿಸಲು ಹೆಚ್ಚು ಸಮಯಾವಕಾಶ ಬೇಕಾಗಿದ್ದು, ಕೂಡಲೇ ಎಲ್ಲಾ ರಸ್ತೆಗಳನ್ನು ಗುಡಿಸಲಾಗುವುದು ಎಂದು ಸಭೆಗೆ ತಿಳಿಸಿದರು.

3) **ಶ್ರೀಮತಿ ವಿನುತ, ಪದಾಧಿಕಾರಿಗಳು, ಹೆಚ್.ಆರ್.ಬಿ.ಆರ್, 3ನೇ ಹಂತ ಬಿಡಿಎ ಬಡಾವಣೆ ಅಸೋಸಿಯೇಷನ್ (ರಿ) ರವರು ಮಾತನಾಡಿ**, ಬಿಡಿಎ ಬಡಾವಣೆಯಲ್ಲಿ ನೀರು ಸರಬರಾಜು ಸಮರ್ಪಕವಾಗಿ ಇರುತ್ತದೆ. ಆದರೆ ನೀರು ಸರಬರಾಜಿನ ಕಾಲಾವಧಿ ಕಡಿಮೆ ಇರುತ್ತದೆ ಎಂದು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ ಜಲಮಂಡಳಿ ಅಭಿಯಂತರರು, ನೀರು ಸರಬರಾಜು ಮಾಡುವ ಅವಧಿಯನ್ನು ವಿಸ್ತರಿಸಲಾಗುವುದು ಎಂದು ಹಾಗೂ ಹೆಚ್ಚು ವೇಗವಾಗಿ ನೀರು ಸರಬರಾಜು ಮಾಡಲಾಗುವುದು ಎಂದು ಸಭೆಗೆ ತಿಳಿಸಿದರು.

4) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ**, ಬೆಸ್ಕಾಂ ಅಧಿಕಾರಿಗಳು ವಿದ್ಯುತ್ ಸರಬರಾಜನ್ನು ಕಡಿತವನ್ನು ಪೂರ್ವಭಾವಿಯಾಗಿ ತಿಳಿಸಲು ಹಾಗೂ ಈಗಾಗಲೇ ಬೆಸ್ಕಾಂ ಇಲಾಖೆಯಿಂದ ಭೂಗತ ಕೇಬಲ್‌ಗಳನ್ನು ಅಳವಡಿಸಿದ್ದು, ಅವುಗಳನ್ನು ಜೋಡಣೆ ಮಾಡಿರುವುದಿಲ್ಲ. ಎಲ್ಲಾ ರಸ್ತೆಗಳಲ್ಲಿ ಭೂಗತ ಕೇಬಲ್‌ಗಳು ತೆರವುಗೊಂಡಿರುತ್ತವೆ. ಇದರಿಂದ ಸಾರ್ವಜನಿಕ ಓಡಾಟಕ್ಕೆ ತೊಂದರೆಯಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ಪ್ರದೇಶದಲ್ಲಿ ಅನೇಕ ರಸ್ತೆಗಳಲ್ಲಿ ಭೂಗತ ಕೇಬಲ್‌ಗಳನ್ನು ಅಳವಡಿಸಲಾಗಿದ್ದು, ಸದರಿ ಕೇಬಲ್‌ಗಳನ್ನು ಜೋಡಣೆ ಮಾಡದೇ ಕೇಬಲ್‌ಗಳು ರಸ್ತೆಯ ಮೇಲ್ಭಾಗಕ್ಕೆ ಮುಖಮಾಡಿ ನಿಂತಿರುತ್ತವೆ. ಮತ್ತು ಇದರಿಂದ ರಸ್ತೆ ಗುಂಡಿಗಳು ಸಹ ಇದ್ದು, ಸಾರ್ವಜನಿಕರಿಗೆ ತೊಂದರೆಯಾಗಿರುತ್ತದೆ. ಆದ್ದರಿಂದ ಕೂಡಲೇ ಭೂಗತ ಕೇಬಲ್‌ಗಳನ್ನು ಜೋಡಣೆ ಮಾಡಿ, ರಸ್ತೆಯ ಗುಂಡಿಗಳನ್ನು ಡಾಂಬರ್‌ನಿಂದ ವಿಶಿಷ್ಟ ವಿವರಣೆಯಂತೆ ಮುಚ್ಚಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಬೆಸ್ಕಾಂ ಅಧಿಕಾರಿಗಳಿಗೆ ಸಭೆಯು ಸರ್ವಾನುಮತದಿಂದ ಆದೇಶಿಸಿತು.

5) **ಶ್ರೀ ಪ್ರಸನ್ನ, ಸದಸ್ಯರು, ಹೆಚ್.ಬಿ.ಆರ್ ಬಡಾವಣೆ ಅಸೋಸಿಯೇಷನ್(ರಿ) ರವರು ಮಾತನಾಡಿ**, ವಾರ್ಡ್ ಪ್ರದೇಶದಲ್ಲಿ ಕೋವಿಡ್ 19 ಪ್ರಕರಣಗಳು ಹೆಚ್ಚಾಗುತ್ತಿದ್ದು, ವಾರ್ಡ್ ಪ್ರದೇಶದಲ್ಲಿರುವ ಉದ್ಯಾನವನಗಳಲ್ಲಿ ವಿಹಾರಕ್ಕಾಗಿ ಹೆಚ್ಚು ಸೇರುವುದರಿಂದ ಉದ್ಯಾನವನಗಳಲ್ಲಿ ಸ್ಯಾನಿಟೈಸೇಷನ್ ಮಾಡಲು ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಹಾಜರಿದ್ದ, ಹಿರಿಯ ಆರೋಗ್ಯ ನಿರೀಕ್ಷಕರು ಕೂಡಲೇ ಕ್ರಮ ವಹಿಸುವುದಾಗಿ ಸಭೆಗೆ ತಿಳಿಸಿದರು.

6) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ಹೆಣ್ಣೂರು ಫ್ಲೈ ಓವರ್ ಮೇಲೆ ಬೀದಿ ದೀಪಗಳು ಉರಿಯುತ್ತಿರುವುದಿಲ್ಲ, ಇದರಿಂದ ವಾಹನ ಅಪಘಾತಗಳು ಸಂಭವಿಸುವ ಪ್ರಮೇಯ ಇರುವುದರಿಂದ ಕೂಡಲೇ ಕ್ರಮ ವಹಿಸಲು ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಹೆಣ್ಣೂರು ಫ್ಲೈ ಓವರ್ ಮೇಲೆ ಇರುವ ಬೀದಿ ದೀಪಗಳ ನಿರ್ವಹಣೆಯನ್ನು ಬಿಡಿಎ ರವರು ನಿರ್ವಹಿಸುತ್ತಿರುವುದರಿಂದ ಬಿಡಿಎ ರವರಿಗೆ ಈ ಬಗ್ಗೆ ಕ್ರಮ ಕೈಗೊಳ್ಳಲು ಪತ್ರ ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

7) **ಶ್ರೀ ಪಿಳ್ಳಪ್ಪ (ಅಧ್ಯಕ್ಷರು, ರಾಮಯ್ಯ ಬಡಾವಣೆ ನಿವಾಸಿಗಳ ಸಂಘ) ರವರು ಮಾತನಾಡಿ,** ವಾರ್ಡ್ ಪ್ರದೇಶದಲ್ಲಿ ವೈಜ್ಞಾನಿಕವಾಗಿ ಅಳವಡಿಸುವ ಹಂಪ್‌ಗಳ ಅವಶ್ಯಕತೆ ಇದ್ದು, ಕೂಡಲೇ ಮಂಜೂರು ಮಾಡಲು ಕೋರಿ ಸಭಾ ಗಮನಕ್ಕೆ ತಂದಾಗ, ಸಭೆಯಲ್ಲಿ ಚರ್ಚಿಸಿ, ವಾರ್ಡ್ ಪ್ರದೇಶದಲ್ಲಿ ಅವಶ್ಯಕ ಇರುವ ಕಡೆ, ವೈಜ್ಞಾನಿಕವಾಗಿ ಹಂಪ್‌ಗಳನ್ನು ನಿರ್ಮಾಣ ಮಾಡಲು ಸ್ಥಳಗಳನ್ನು ಗುರುತಿಸಲು ಸಂಚಾರಿ ಪೋಲೀಸರ ಸಹಯೋಗದೊಂದಿಗೆ ಸರ್ವೆ ಮಾಡಿ, ವರದಿಯನ್ನು ವಾರ್ಡ್ ಸಮಿತಿ ಮುಖಾಂತರ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ ರವರಿಗೆ ಪತ್ರ ಬರೆಯಲು ಸಭೆಯು ಸರ್ವಾನುಮತದಿಂದ ಆದೇಶಿಸಿತು.

8) **ವೈದ್ಯಾಧಿಕಾರಿಗಳ ಪರವಾಗಿ, ಮಾತನಾಡಿದ ಆಸ್ಪತ್ರೆಯ ಸಿಬ್ಬಂದಿ,** ಪ್ರಸ್ತುತ ವಾರ್ಡ್ ಪ್ರದೇಶದಲ್ಲಿ ಕೋವಿಡ್–19 ನಿಯಂತ್ರಣದಲ್ಲಿದ್ದು, ಒಟ್ಟು 701 ಪ್ರಕರಣಗಳು ಇದ್ದು, 461 ಹೋಮ್ ಐಸೋಲೇಷನ್ ಪೂರ್ಣಗೊಳಿಸಿರುತ್ತಾರೆ, 183 ಜನ ಆಸ್ಪತ್ರೆಯಿಂದ ಬಿಡುಗಡೆ ಹೊಂದಿರುತ್ತಾರೆ, 20 ಜನ ಮರಣ ಹೊಂದಿರುತ್ತಾರೆ, ಸಕ್ರಿಯ ಪ್ರಕರಣಗಳು 37 ಆಗಿರುತ್ತವೆ. ನಂತರ ಮಾತನಾಡಿ, ವಾರ್ಡ್ ಪ್ರದೇಶದಲ್ಲಿ 28622 ಜನಕ್ಕೆ ಆರ್.ಟಿ.ಪಿ.ಸಿ.ಆರ್ ತಪಾಸಣೆ ಮಾಡಲಾಗಿರುತ್ತದೆ. 6038 ಜನಕ್ಕೆ ರ್‍ಯಾಪಿಡ್ ತಪಾಸಣೆ ಕೈಗೊಳ್ಳಲಾಗಿರುತ್ತದೆ. ಹಾಗೂ ವಾರ್ಡ್ ಪ್ರದೇಶದಲ್ಲಿ ಆರ್.ಟಿ.ಪಿ.ಸಿ.ಆರ್ ತಪಾಸಣೆ, ರ್‍ಯಾಪಿಡ್ ತಪಾಸಣೆಯನ್ನು ನಿರಂತರವಾಗಿ ಕೈಗೊಳ್ಳಲಾಗುತ್ತಿರುತ್ತದೆ ಎಂದು ಸಭೆಗೆ ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ನಿರ್ಣಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

Prasanna Kumar
ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.29, ಕಾಚರಕನಹಳ್ಳಿ

**ಪ್ರತಿಯನ್ನು**

1) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
4) ವಾರ್ಡ್ ಕಮಿಟಿಯ ಸದಸ್ಯರಿಗೆ.
5) ಕಛೇರಿ ಕಡತಕ್ಕೆ.